Akashvani: Bangalore
Regional Bulletin In Kannada
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

24.09.2026: 14.30hrs

*********

**ಮುಖ್ಯಾಂಶಗಳು :**

- ವಿಜಯಪುರದ ಇಂಡಿ ಸೇರಿದಂತೆ ಮತ್ತೆ ೨೯ ತಾಲೂಕುಗಳು ಬರಪೀಡಿತ ಪಟ್ಟಿಗೆ ಸೇರ್ಪಡೆ
- ವಿಧಾನಮಂಡಲದ ಉಭಯ ಸದನಗಳಲ್ಲಿ ಬರ ಕುರಿತು ಮುಂದುವರಿದ ಚರ್ಚೆ; ಉತ್ತರ ಕರ್ನಾಟಕದ ಪರಿಸ್ಥಿತಿ ಮೇಲೆ ಬೆಳಕು ಚೆಲ್ಲಿದ ಸದಸ್ಯ ಕೋನರೆಡ್ಡಿ
- ರಾಜ್ಯದಲ್ಲಿ ಹೆಚ್ಚಿದ ವಿದ್ಯುತ್ ಬೇಡಿಕೆ; ಗ್ರಾಹಕರ ಹಿತ ರಕ್ಷಿಸುವಂತೆ ಇಂಧನ ಇಲಾಖೆಗೆ ಸರ್ಕಾರ ಸೂಚನೆ
- ಕೇಂದ್ರ ಚುನಾವಣಾ ಆಯೋಗದ ಮುಖ್ಯ ಆಯುಕ್ತರು ರಾಜೀನಾಮೆ ನೀಡುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಆಗ್ರಹ
- ಅಕ್ಟೋಬರ್ ೨೯ ರಿಂದ ನವೆಂಬರ್ ೧೧ರ ವರೆಗೆ ಹಾಸನಾಂಬ ಜಾತ್ರಾ ಮಹೋತ್ಸವ; ಹಾಸನ ಜಿಲ್ಲಾಡಳಿತ ಮಾಹಿತಿ

*******

ಕಾಂಗ್ರೆಸ್ ಶಾಸಕ ಯಶವಂತರಾಯ ಗೌಡ ಪಾಟೀಲ್ ಒತ್ತಡಕ್ಕೆ ಮಣಿದ ರಾಜ್ಯ ಸರ್ಕಾರ ವಿಜಯಪುರ ಜಿಲ್ಲೆಯ ಇಂಡಿ ತಾಲೂಕನ್ನು ಬರಪೀಡಿತ ಪಟ್ಟಿಗೆ ಸೇರಿಸಿದೆ. ಈ ಕುರಿತು ಅಧಿಕೃತ ಅಧಿಸೂಚನೆಯನ್ನು ಹೊರಡಿಸಿದೆ. ಹೊಸ ಪಟ್ಟಿಯಲ್ಲಿ ಇಂಡಿ, ಔರಾದ್, ಗೋಕಾಕ್, ರಾಮದುರ್ಗ, ಸವದತ್ತಿ, ಕಾಗವಾಡ, ಚಡಚಣ, ಕಲಘಟಗಿ, ಕುಂದಗೋಡ ಮತ್ತು ಅಣ್ಣಾವರ ಸೇರಿದಂತೆ ಒಟ್ಟು ೨೯ ತಾಲೂಕುಗಳು ಬರಪೀಡಿತ ಪಟ್ಟಿಗೆ ಸೇರ್ಪಡೆಗೊಂಡಿದೆ. ೨೦೨೦ರಲ್ಲಿ ಕೇಂದ್ರ ಸರ್ಕಾರ ರೂಪಿಸಿದ ಬರ ಘೋಷಣಾ ಮಾರ್ಗಸೂಚಿಗಳ ಅಡಿಯಲ್ಲಿ ನಾಲ್ಕು ಹಂತಗಳಲ್ಲಿ ೧೮೮ ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದೆ.

***********

ವಿಧಾನಸಭೆ ಅಧಿವೇಶನದ ನಾಲ್ಕನೇ ದಿನವಾದ ಇಂದು ಕೆಳಮನೆಯಲ್ಲಿ ಬರ ಕುರಿತಂತೆ ಚರ್ಚೆ ನಡೆಯುತ್ತಿದೆ. ಬರದ ಮೇಲಿನ ಚರ್ಚೆಯಲ್ಲಿ ಭಾಗವಹಿಸಿ ಮಾತನಾಡಿದ ಸದಸ್ಯ ಬಸವರಾಜು, ಬರಪೀಡಿತ ತಾಲೂಕುಗಳಿಗೆ ಕೂಡಲೇ ಪರಿಹಾರ ಹಣ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದ್ದಾರೆ. ಕಾಂಗ್ರೆಸ್ ಸದಸ್ಯ ಕೋನ ರೆಡ್ಡಿ, ಚರ್ಚೆಯಲ್ಲಿ ಭಾಗವಹಿಸಿ ಮಾತನಾಡಿ, ರಾಜ್ಯದಲ್ಲಿ ೧೫೦ ವರ್ಷಗಳ ಬಳಿಕ ಇದೇ ಮೊದಲ ಬಾರಿಗೆ ಭೀಕರ ಬರಪರಿಸ್ಥಿತಿ ಎದುರಾಗಿದೆ. ಉತ್ತರ ಒಳನಾಡು, ದಕ್ಷಿಣ ಒಳನಾಡು, ಕರಾವಳಿ, ಮಲೆನಾಡು ಪ್ರದೇಶಗಳು ಮಳೆಯಿಲ್ಲದೆ ತತ್ತರಿಸಿ ಹೋಗಿವೆ ಎಂದು ಬರಪರಿಸ್ಥಿತಿಯ ಕರಾಳತೆಯ ಮೇಲೆ ಬೆಳಕು ಚೆಲ್ಲಿದರು. ಕೇಂದ್ರ ಸರ್ಕಾರ ಬರಪೀಡಿತ ಪ್ರದೇಶಗಳ ಘೋಷಣೆಯ ಮಾನದಂಡ ಬದಲಾಯಿಸುವ ಅಗತ್ಯವಿದೆ ಎಂದು ತಿಳಿಸಿದರು. ರಾಜ್ಯದ ೩೧ ಜಿಲ್ಲೆಗಳಲ್ಲಿ ಎರಡು ಜಿಲ್ಲೆ ಹೊರತುಪಡಿಸಿ, ಈಗ ೨೯ ಜಿಲ್ಲೆಗಳು ಬರಪೀಡಿತವಾಗಿವೆ ಎಂದು ಸದನದ ಗಮನ ಸೆಳೆದರು. ಬಿಜೆಪಿ ಸದಸ್ಯ ಸುನಿಲ್ ಕುಮಾರ್ ಮಾತನಾಡಿ, ರಾಜ್ಯ ಸರ್ಕಾರ ಪೂರ್ವ ತಯಾರಿ, ನಡೆಸದೇ ಇರುವುದರಿಂದ ಪರಿಸ್ಥಿತಿ ಗಂಭೀರವಾಗಿದೆ ಎಂದು ಆರೋಪಿಸಿದರು. ವಿಜಿ-ಜಿ ರಾಮ್ ಜಿ ಯೋಜನೆ ಬಳಸಿಕೊಳ್ಳುವ ಮೂಲಕ ಬರಪೀಡಿತ ಪ್ರದೇಶದಿಂದ ಜನರು ಗುಳೆ ಹೋಗುವುದನ್ನು ತಡೆಯಬಹುದಾಗಿತ್ತು ಎಂದು ಸರ್ಕಾರದ ಗಮನ ಸೆಳೆದರು. ಈ ವೇಳೆ ಮಧ್ಯ ಪ್ರವೇಶಿಸಿ ಮಾತನಾಡಿದ ಗ್ರಾಮೀಣಾಭಿವೃದ್ಧಿ ಸಚಿವ ಈಶ್ವರ್ ಖಂಡ್ರೆ, ಒಂದು ಕೋಟಿ ೬೦ ಲಕ್ಷ ಮಾನವ ದಿನ ಉದ್ಯೋಗ ಸೃಜನೆ ಮಾಡಲಾಗಿದೆ. ಕೃಷಿ ಹೊಂಡ, ಕೆರೆ ನಿರ್ಮಾಣ, ರಸ್ತೆ ಸೇರಿದಂತೆ ೩೦೦ ಕಾಮಗಾರಿಗಳನ್ನು ಗುರುತಿಸಲಾಗಿದೆ ಎಂದು ಸದನಕ್ಕೆ ಮಾಹಿತಿ ನೀಡಿದರು.

********

ಕರ್ನಾಟಕ ಲೋಕಸೇವಾ ಆಯೋಗದಲ್ಲಿನ ಅಕ್ರಮ ನೇಮಕಾತಿ ಪ್ರಕರಣವನ್ನು ಸಿಬಿಐ ತನಿಖೆಗೆ ಒಳಪಡಿಸಬೇಕು ಎಂದು ವಿರೋಧ ಪಕ್ಷದ ನಾಯಕ ಚಲವಾದಿ ನಾರಾಯಣಸ್ವಾಮಿ ಒತ್ತಾಯಿಸಿದ್ದಾರೆ. ಮೇಲ್ಮನೆಯಲ್ಲಿಂದು ರಾಜ್ಯದ ಬರ ಪರಿಸ್ಥಿತಿ ಬಗ್ಗೆ ಚರ್ಚೆ ನಡೆಸಲು, ಸಭಾಪತಿ ಸಲೀಂ ಅಹಮದ್, ಕಾಂಗ್ರೆಸ್ ಸದಸ್ಯ ರವಿ ಅವರಿಗೆ ಅವಕಾಶ ನೀಡಿದ ವೇಳೆ, ಮಧ್ಯ ಪ್ರವೇಶಿಸಿದ ಚಲವಾದಿ ನಾರಾಯಣಸ್ವಾಮಿ ಕೆಪಿಎಸ್‌ಸಿ ಅಕ್ರಮದ ಬಗ್ಗೆ ಚರ್ಚೆ ನಡೆಸಲು ನಿಲುವಳಿ ಸೂಚನೆ ಮಂಡನೆ ಮಾಡಲು ಅವಕಾಶ ಮಾಡಿಕೊಡುವಂತೆ ಆಗ್ರಹಿಸಿದರು. ಈ ವೇಳೆ ಸಭಾಪತಿ ಸಲೀಂ ಅಹಮದ್ ಮಧ್ಯ ಪ್ರವೇಶಿಸಿ, ಪ್ರಸ್ತುತ ಬರಗಾಲ ಕುರಿತಂತೆ ಚರ್ಚೆ ನಡೆಸಬೇಕಿದೆ. ಅದಕ್ಕೆ ಮುಖ್ಯಮಂತ್ರಿಗಳು ಉತ್ತರವನ್ನೂ ನೀಡಬೇಕಿದೆ. ಬಳಿಕ ಈ ವಿಷಯ ಚರ್ಚೆಗೆ ಎತ್ತಿಕೊಳ್ಳುವ ಭರವಸೆ ನೀಡಿದರು.

********

ರಾಜ್ಯದಲ್ಲಿ ೨೦೦ಕ್ಕೂ ಹೆಚ್ಚು ತಾಲೂಕುಗಳು ಬರಪರಿಸ್ಥಿತಿ ಎದುರಿಸುತ್ತಿದ್ದು, ಕೇಂದ್ರ ಸರ್ಕಾರ ರಾಜ್ಯಕ್ಕೆ ಬರ ಪರಿಹಾರ ನಿಧಿ ಬಿಡುಗಡೆ ಮಾಡಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಒತ್ತಾಯಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಸಂಬಂಧ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿಯಾಗಿ, ಮನವಿ ಸಲ್ಲಿಸಲು ನವದೆಹಲಿಗೆ ತೆರಳುವುದಾಗಿ ತಿಳಿಸಿದ್ದಾರೆ. ಪ್ರಧಾನಿ ಬಳಿಗೆ ಸರ್ವಪಕ್ಷ ನಿಯೋಗವನ್ನು ಕೊಂಡೊಯ್ಯುವುದಾಗಿ ಸ್ಪಷ್ಟಪಡಿಸಿದ್ದಾರೆ.

****ಧ್ವನಿ*** ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

ರಾಜ್ಯದಲ್ಲಿ ವಿದ್ಯುತ್ ಬೇಡಿಕೆ ಸುಮಾರು ೨೦ ಸಾವಿರ ಮೆಗಾವ್ಯಾಟ್‌ಗೆ ತಲುಪಿದ್ದು, ವಿದ್ಯುತ್ ಪೂರೈಕೆಗೆ ಸಂಬಂಧಿಸಿದಂತೆ ಗಂಭೀರ ಪರಿಸ್ಥಿತಿ ಎದುರಾಗಿದೆ. ವಿದ್ಯುತ್ ಪರಿಸ್ಥಿತಿ ಪರಿಶೀಲಿಸಿ, ಗ್ರಾಹಕರ ಹಿತವನ್ನು ರಕ್ಷಿಸುವಂತೆ ಇಂಧನ ಇಲಾಖೆಗೆ ಸೂಚನೆ ನೀಡಿರುವುದಾಗಿ ಹೇಳಿದ್ದಾರೆ. ಸಕ್ಕರೆ ಕಾರ್ಖಾನೆಗಳೊಂದಿಗೆ ಚರ್ಚೆಸಲಾಗಿದ್ದು, ಸರ್ಕಾರದೊಂದಿಗೆ ಸಹಕರಿಸುವಂತೆ ಸೂಚಿಸಲಾಗಿದೆ. ಸಕ್ಕರೆ ಕಾರ್ಖಾನೆಗಳು ಉತ್ಪಾದಿಸುವ ವಿದ್ಯುತ್‌ಅನ್ನು ಸರ್ಕಾರಕ್ಕೆ ನೀಡಬೇಕು ಎಂದು ಅವರು ತಿಳಿಸಿದ್ದಾರೆ. ಇದೇ ವೇಳೆ ಹಣಕಾಸು ಇಲಾಖೆ ನೀಡಿರುವ ಸಲಹೆಯನ್ನು ಆಧರಿಸಿ, ಬಿಜೆಪಿ ನಡೆಸುತ್ತಿರುವ ಪ್ರತಿಭಟನೆಗೆ ಪ್ರತಿಕ್ರಿಯಿಸಿರುವ ಮುಖ್ಯಮಂತ್ರಿ, ಇದು ಹಣಕಾಸು ಇಲಾಖೆಯ ಸಾಮಾನ್ಯ ಆಡಳಿತ ಪ್ರಕ್ರಿಯೆಯಾಗಿದ್ದು, ರಾಜಕೀಯಗೊಳಿಸುವ ಅಗತ್ಯವಿಲ್ಲ ಎಂದು ಹೇಳಿದ್ದಾರೆ.

********

ಕೇಂದ್ರ ಚುನಾವಣಾ ಆಯೋಗದ ಮುಖ್ಯ ಆಯುಕ್ತರ ಸ್ಥಾನಕ್ಕೆ ಜ್ಞಾನೇಶ್ ಕುಮಾರ್ ರಾಜೀನಾಮೆ ನೀಡುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಆಗ್ರಹಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಸ್‌ಐಆರ್ ಪ್ರಕ್ರಿಯೆ ರದ್ದುಪಡಿಸಿ, ಹೊಸದಾಗಿ ಮತದಾರರ ಪಟ್ಟಿ ಪರಿಷ್ಕರಿಸುವಂತೆ ಒತ್ತಾಯಿಸಿದ್ದಾರೆ. ಸಾಮಾನ್ಯ ಜನರ ಮತದಾನದ ಹಕ್ಕನ್ನು ರಾಜಕೀಯ ಉದ್ದೇಶಗಳಿಗಾಗಿ ದುರುಪಯೋಗ ಪಡಿಸಿಕೊಳ್ಳಲಾಗುತ್ತಿದೆ ಎಂದು ಅವರು ಆರೋಪಿಸಿದ್ದಾರೆ.

********

ವರ್ಷಕ್ಕೆ ಒಮ್ಮೆ ಮಾತ್ರ ದರ್ಶನ ನೀಡುವ ಹಾಸನದ ಹಾಸನಾಂಬ ಜಾತ್ರಾ ಮಹೋತ್ಸವ ಅಕ್ಟೋಬರ್ ೨೯ ರಿಂದ ನವೆಂಬರ್ ೧೧ ರವರೆಗೆ ನಡೆಯಲಿದೆ. ಜಿಲ್ಲಾಧಿಕಾರಿ ಕಚೇರಿಯಲ್ಲಿ ಇಂದು ನಡೆದ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಜಿಲ್ಲಾಧಿಕಾರಿ ಕೆ. ಎಸ್ ಲತಾಕುಮಾರಿ ಅಗತ್ಯ ಸಿದ್ಧತೆ ನಡೆಸುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಈ ಬಾರಿ ಹಾಸನಾಂಬ ದರ್ಶನಕ್ಕೆ ೧೪ ದಿನಗಳ ಅವಕಾಶ ದೊರೆತಿದ್ದು, ಮೊದಲ ಹಾಗೂ ಕೊನೆಯ ದಿನ ಹೊರತುಪಡಿಸಿ ಇನ್ನುಳಿದ ೧೨ ದಿನ ಸಾರ್ವಜನಿಕ ದರ್ಶನಕ್ಕೆ ಅವಕಾಶವಿರಲಿದೆ ಎಂದು ಮಾಹಿತಿ ನೀಡಿದ್ದಾರೆ. ಜಿಲ್ಲೆಯ ಏಳು ತಾಲೂಕುಗಳನ್ನು ಬರಪೀಡಿತ ಪಟ್ಟಿಗೆ ಸೇರಿಸಲಾಗಿದೆ. ಆದರೂ ಸಂಪ್ರದಾಯದಂತೆ ಹಾಸನಾಂಬ ಹಾಗೂ ಸಿದ್ದೇಶ್ವರ ಜಾತ್ರಾ ಮಹೋತ್ಸವ ನಡೆಯಲಿದೆ ಎಂದು ತಿಳಿಸಿದ್ದಾರೆ.

********

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಸಾರ್ವಜನಿಕ ಸೇವೆಯಲ್ಲಿ ೨೫ ವರ್ಷ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ ದೇಶಾದ್ಯಂತ 'ಸೇವಾ ಸಂಕಲ್ಪ ಅಭಿಯಾನ' ನಡೆಯುತ್ತಿದೆ. ಅದರ ಭಾಗವಾಗಿ ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ ಭಾರತದ ಸೌರ ಕ್ರಾಂತಿ ಕುರಿತು ಒಂದು ನೋಟ ಇಲ್ಲಿದೆ. ಭಾರತದ ಸೌರಶಕ್ತಿ ಕ್ಷೇತ್ರದಲ್ಲಿ ಅಭೂತಪೂರ್ವ ಕ್ರಾಂತಿ ಸಂಭವಿಸಿದ್ದು, ದೇಶದ ಒಟ್ಟು ಸ್ಥಾಪಿತ ಸೌರ ವಿದ್ಯುತ್ ಸಾಮರ್ಥ್ಯ ಹೊಸ ಮೈಲಿಗಲ್ಲನ್ನು ತಲುಪಿದೆ. ಪ್ರಧಾನಿ ನರೇಂದ್ರ ಮೋದಿ, ಗುಜರಾತ್ ಮುಖ್ಯಮಂತ್ರಿಯಾಗಿದ್ದಾಗ ಪ್ರತ್ಯೇಕ ಸೌರ ನೀತಿಯನ್ನು ಜಾರಿಗೆ ತರುವ ಮೂಲಕ ಆರಂಭಗೊಂಡ ಈ ಪಯಣ, ಇಂದು ಜಾಗತಿಕ ಮಟ್ಟದಲ್ಲಿ ಭಾರತವನ್ನು ನವೀಕರಿಸಬಹುದಾದ ಇಂಧನ ವಲಯದ ಪ್ರಮುಖ ಶಕ್ತಿಯನ್ನಾಗಿ ಹೊರಹೊಮ್ಮಿಸಿದೆ. ಇದರಿಂದಾಗಿ ಸುಮಾರು ೧೯ ಲಕ್ಷ ಕುಟುಂಬಗಳು ಶೂನ್ಯ ವಿದ್ಯುತ್ ಬಿಲ್ ಪಡೆಯುತ್ತಿವೆ. ರಾಜ್ಯದಲ್ಲಿಯೂ ಕೃಷಿಯಲ್ಲಿ ಸೌರ ವಿದ್ಯುತ್ ಬಳಕೆ ಹೆಚ್ಚಾಗುತ್ತಿದೆ. ವರ್ಷಕ್ಕೆ ಸುಮಾರು ೧೪೪ ಮೆಗಾವ್ಯಾಟ್ ಗ್ರಿಡ್ ವಿದ್ಯುತ್ ಬೇಡಿಕೆ ಕಡಿಮೆಯಾಗಿದೆ. ಕೇಂದ್ರ ಸರ್ಕಾರದ ಈ ಸೌರ ನೀತಿಯಿಂದ ರಾಜ್ಯದಲ್ಲಿ ರೈತರ ಕೃಷಿ ಪಂಪ್ ಸೆಟ್‌ಗಳಿಗೆ ತಡೆರಹಿತ ಹಗಲು ವಿದ್ಯುತ್ ಪೂರೈಕೆಗೆ ಭದ್ರ ಬುನಾದಿ ಹಾಕಿದೆ.

********

ಹಿರಿಯ ಮನೋ ವೈದ್ಯ, ಪ್ರೇರಣಾದಾಯಿ ವಾಗ್ಮಿಗಳು ಮತ್ತು ಅಂಕಣಕಾರರೂ ಆಗಿದ್ದ ಧಾರವಾಡದ ಡಾ.ಆನಂದ ಪಾಂಡುರಂಗಿ ನಿಧನ ಹೊಂದಿದ್ದಾರೆ. ಪಾಂಡುರಂಗಿ ಅವರು ದಶಕಗಳ ಕಾಲ ವೈದ್ಯಕೀಯ ಸೇವೆಯಲ್ಲಿ ತೊಡಗಿ, ಸಮಾಜದಲ್ಲಿ ಮಾನಸಿಕ ಆರೋಗ್ಯದ ಕುರಿತು ಜಾಗೃತಿ ಮೂಡಿಸಿ, ಯುವ ಜನರಲ್ಲಿ, ವಿದ್ಯಾರ್ಥಿಗಳಲ್ಲಿ ವ್ಯಕ್ತಿತ್ವ ವಿಕಸನ ಹಾಗೂ ಆತ್ಮವಿಶ್ವಾಸ ಬೆಳೆಸುವಲ್ಲಿ ಕೊಡುಗೆ ನೀಡಿದ್ದರು. ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ, ಭಾರತೀಯ ವೈದ್ಯಕೀಯ ಕ್ಷೇತ್ರದ ಪ್ರತಿಷ್ಠಿತ ಡಾ. ಬಿ.ಸಿ.ರಾಯ್ ಪ್ರಶಸ್ತಿ ಸೇರಿದಂತೆ ಹಲವು ಗೌರವ-ಪುರಸ್ಕಾರಗಳಿಗೆ ಇವರು ಭಾಜನರಾಗಿದ್ದರು. ಆನಂದ ಪಾಂಡುರಂಗಿ ನಿಧನದ ಸುದ್ದಿ ತಿಳಿದು ತೀವ್ರ ಆಘಾತ ಮತ್ತು ದುಃಖವಾಯಿತೆಂದು ಕೇಂದ್ರ ಶಿಕ್ಷಣ ಸಚಿವ ಪ್ರಲ್ಹಾದ ಜೋಶಿ ಕಂಬನಿ ಮಿಡಿದಿದ್ದಾರೆ. ಅವರ ಕುಟುಂಬವರ್ಗ ಹಾಗೂ ಅಭಿಮಾನಿಗಳಿಗೆ ಅಗಲಿಕೆಯ ದುಃಖ ಸಹಿಸಿಕೊಳ್ಳುವ ಶಕ್ತಿ ತುಂಬಲಿ ಎಂದು ಪ್ರಾರ್ಥಿಸಿದ್ದಾರೆ.

********

ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಸಭಾಂಗಣದಲ್ಲಿಂದು ಜಿಲ್ಲಾಧಿಕಾರಿ ಡಾ ಕೆ.ಎನ್ ಅನುರಾಧ ಅಧ್ಯಕ್ಷತೆಯಲ್ಲಿ ಸ್ವಚ್ಛತಾ ಸೇವೆ-೨೦೨೫ ಆಂದೋಲನ ಸಭೆ ನಡೆಯಿತು. ಸಭೆಯಲ್ಲಿ ಸಾರ್ವಜನಿಕ ಸ್ಥಳಗಳನ್ನು ಸ್ವಚ್ಛಗೊಳಿಲು ಕ್ರಮ ವಹಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ ಕೆ.ಎನ್ ಅನುರಾಧ ಸೂಚಿಸಿದರು. ಗ್ರಾಮೀಣ ಸಮುದಾಯದಲ್ಲಿ ಶುಚಿತ್ವ, ಉತ್ತಮ ನೈರ್ಮಲ್ಯ ಅಭ್ಯಾಸಗಳನ್ನು ರೂಢಿಸುವ ನಿಟ್ಟಿನಲ್ಲಿ ಮತ್ತು ಜನರಲ್ಲಿ ಜಾಗೃತಿ ಮೂಡಿಸಿ ಸ್ವಚ್ಛತೆಯನ್ನು ಜನಾಂದೋಲನವಾಗಿ ರೂಪಿಸುವ ಉದ್ದೇಶದಿಂದ ಸ್ವಚ್ಛ ಭಾರತ್ ಮಿಷನ್ ಯೋಜನೆಯಡಿ ಅಕ್ಟೋಬರ್ ೨ರವರೆಗೆ "ಸ್ವಚ್ಛತೆಯೇ ಸೇವೆ-೨೦೨೫" ಅಭಿಯಾನ ನಡೆಯುತ್ತಿದೆ.

****END****